ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE

# ಸಾರ್ವಜನಿಕರಿಗೂ ಈ ಸಲ ಕಲಾಪಕ್ಕೆ ಪ್ರವೇಶ

ಬೆಂಗಳೂರು: ಕೋವಿಡ್‌ನಿಂದಾಗಿ ಕಳೆದ ಒಂದು ವರ್ಷದಿಂದ ಸಾರ್ವಜನಿಕರಿಗೆ ನಿರ್ಬಂಧಿಸಲಾಗಿದ್ದ ವಿಧಾನಸಭೆ ಅಧಿವೇಶನದ ಕಲಾಪ ವೀಕ್ಷಣೆ ಈ ಬಾರಿ ಮುಕ್ತವಾಗಲಿದೆ. ಆದರೆ, ವಿದ್ಯಾರ್ಥಿಗಳಿಗೆ ನಿಷೇಧ ಮುಂದುವರಿದಿದೆ ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ. ವಿಧಾನಸೌಧದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳನ್ನು ಹೊರತುಪಡಿಸಿ ಸಾರ್ವಜನಿಕರಿಗೆ ಈ ಬಾರಿ ವಿಧಾನಸಭೆ ಅಧಿವೇಶನದ ಕಾರ್ಯಕಲಾಪ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗುವುದು ಎಂದರು.